ಇಂದು ದಿನಾಂಕ **09-10-2023** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದ**

ನಾರಾಯಣ ದಾವಾ ಆಸ್ತಿ ಖರೀದಿಸಿದ ಬಗ್ಗೆ 2 ಖರೀದಿ ಪತ್ರಗಳ ದೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ-1 ಮತ್ತು 2 ಎಂದು, ದಾವಾ ಆಸ್ತಿಗೆ ಸಂಬಂಧಿಸಿದ ಸರ್ವೆ ನಕಾಶೆಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ-3** ಎಂದು, ಕಾಶೀನಾಥ ಇವರ ಮರಣ ಪ್ರಮಾಣ ಪತ್ರ (ಕೈಬರವಣಿಗೆಯ) ವನ್ನು ಹಾಜರುಪಡಿಸಿದ್ದು ಅದನ್ನು **ನಿಪಿ-4** ಎಂದು, ಸದರೀಯವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿಪಿ-5** ಎಂದು, ಮೃತನ ಕುಟುಂಬದ ಜೀವಿತ ಸದಸ್ಯರ ದೃಡೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-**6** ಎಂದು ಗುರುತಿಸಲಾಯಿತು. ನಾರಾಯಣ ರಾವ್ ರವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿಪಿ-7** ಎಂದು, ರಮಾಬಾಯಿಯವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿಪಿ-8** ಎಂದು, ಓ ಎಸ್ ನಂ. 76/2010 ರ ಅಸಲರ್ಜಿಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ-9** ಎಂದು, ಸದರೀ ದಾವೆಯ ವಿವಾದಾಂಶಗಳ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ-10** ಎಂದು ಗುರುತಿಸಲಾಯಿತು.

**(ವಾದಿಯರ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಸಮಯ ಕೋರಿದ್ದು ಅವರ ಕೋರಿಕೆಯನ್ನು ಮನ್ನಿಸಿ ಮುಂದುವರೆದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ.

ಪ್ರ ಹಿ ದಿ ನ್ಯಾ ಹಾಗೂ ಸಿಜೆಎಂ
ಧಾರವಾಡ